ಅ ಉತ್ತರಹಳ್ಳಿ ಕ್ಷೇತ್ರದ ಯಶವಂತಪುರ ಹೋಬಳಿ ಕೊಡಿಗೇಹಳ್ಳಿ ಗ್ರಾಮದ ಸರ್ಕಾರಿ ಜಮೀನು ಸರ್ವೆ ನಂ. 86ರಲ್ಲಿ ಗ್ರಾಮಸ್ಥರು ಸ್ಮಶಾನಕ್ಕಾಗಿ 5 ಎಕರೆ ಜಮೀನನ್ನು ಕೋರಿ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸ್ಮಶಾನಕ್ಕಾಗಿ ಜಮೀನನ್ನು ನೀಡಲು ಇರುವ ತೊಡಕುಗಳೇನು? ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಬಂದಿದೆ.

ಆ) ಯಶವಂತಪುರ ಹೋಬಳಿ, ಕೊಡಿಗೇಹಳ್ಳಿ ಗ್ರಾಮದ ಸರ್ವೆ ನಂ. 86ರಲ್ಲಿನ ಪೂರ್ಣ ವಿಸ್ತೀರ್ಣವನ್ನು ಬೆಂಗಳೂರು-ಮೈಸೂರು ಕಾರಿಡಾರ್ ರಸ್ತೆ ಯೋಜನೆಗೆ ನೀಡಿರುವುದರಿಂದ ಸದರಿ ಸರ್ವೆ ನಂಬರ್‌ನಲ್ಲಿ ಸ್ಮಶಾನಕ್ಕಾಗಿ ಜಮೀನು ಮಂಜೂರಾತಿಗೆ ಲಭ್ಯವಿರುವುದಿಲ್ಲ. ಆದ್ದರಿಂದ ಬೇರೆ ಕಡೆ ಸರ್ಕಾರಿ ಜಮೀನನ್ನು ಗುರುತಿಸಿ ಸ್ಮಶಾನಕ್ಕಾಗಿ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ಹೈವೇಗೆ ಜಮೀನುಗಳ ವಶ

4835 - ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು -ಮೈಸೂರು ಎಕ್ಸ್‌ಪ್ರೆಸ್ ಹೈವೇಗೆ ಜಮೀನುಗಳನ್ನು ವಶಪಡಿಸಿಕೊಳ್ಳಲಾಗಿದೆಯೇ? ಎಷ್ಟು ಜಮೀನನ್ನು ವಶಪಡಿಸಿಕೊಳ್ಳಲಾಗಿದೆ?

ಆ) ಬೆಂಗಳೂರು ಸುತ್ತಮುತ್ತ ರಾಷ್ಟ್ರೀಯ ಹೆದ್ದಾರಿ 4 ರಿಂದ 7 ರವರೆವಿಗೂ ಈ ರಸ್ತೆ ಕಾಮಗಾರಿಯನ್ನು ಯಾವ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ? ಕಾಮಗಾರಿ ಯಾವಾಗ ಪ್ರಾರಂಭವಾಗುವುದು?

ಇ) ವಶಪಡಿಸಿಕೊಂಡಿರುವ ಜಮೀನಿಗೆ ಸರ್ಕಾರ ನೀಡಿರುವ ಪರಿಹಾರ ಹಣವೆಷ್ಟು?

ಈ) ಸರ್ಕಾರಿ ಜಮೀನಿನಲ್ಲಿ ಬಗರ್ ಹುಕಂ ಸಾಗುವಳಿ ಮಾಡುತ್ತಿದ್ದ ಬಡ ರೈತರಿಗೆ ಸರ್ಕಾರದಿಂದ ಸಿಗುವ ಪರಿಹಾರ ಎಷ್ಟು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಭೂಸ್ವಾಧೀನ ಪ್ರಕ್ರಿಯೆಗಳನ್ನು ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಪ್ರದೇಶ ಮಂಡಳಿಯ ಮೂಲಕ ಕೆ.ಐ.ಎ.ಡಿ.ಬಿ ಕಾಯಿದೆ ಅನ್ವಯ ಪ್ರಾರಂಭಿಸಲಾಗಿದೆ. ಎಕ್ಸ್‌ಪ್ರೆಸ್ ಹೈವೇ ಮತ್ತಿತರ ರಸ್ತೆಗಳಿಗೆ ಸಂಬಂಧಿಸಿದಂತೆ ಒಟ್ಟಾರೆ 6,999 ಎಕರೆಗಳನ್ನು ವಶಪಡಿಸಿಕೊಳ್ಳಲಾಗುವುದು.

ಆ) ರಾಷ್ಟ್ರೀಯ ಹೆದ್ದಾರಿಗಳಾದ ನಂ. 4 ಮತ್ತು 7 ನ್ನು ಕೂಡಿಸುವ ವರ್ತುಲ ರಸ್ತೆಯಾದ 41 ಕಿ.ಮೀ ಬಿಎಂಐಸಿ ಯೋಜನೆಯ ಭಾಗವಾಗಿದ್ದು, ಸದರಿ ಕಾಮಗಾರಿಗಳನ್ನು ನಂದಿ ಇನ್‌ಪ್ರಾಸ್ಟ್ರಕ್ಚರ್ ಎಂಟರ್‌ಪ್ರೈಸಸ್ ಲಿಮಿಟೆಡ್ ಸಂಸ್ಥೆ (ನೈಸಿಲ್)ಗೆ ನೀಡಲಾಗಿದೆ. ಸದರಿ ಕಾಮಗಾರಿಯು ಸಧ್ಯದಲ್ಲೇ ಪ್ರಾರಂಭಗೊಳ್ಳಲಿದೆ.

ಇ) ಕಂಪನಿಯು ನೀಡಬೇಕಾಗಿರುವ ಪರಿಹಾರ ಮೊತ್ತವನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಬೆಲೆ ನಿಗಧಿ ಸಮಿತಿಯು ನಿಗಧಿಪಡಿಸುವುದು.

ಈ) ಸರ್ಕಾರಿ ಜಮೀನಿನಲ್ಲಿ ಬಗರ್ ಹುಕುಂ ಸಾಗುವಳಿ ಮಾಡುತ್ತಿದ್ದ ಬಡ ರೈತರಿಗೆ ಸರ್ಕಾರದಿಂದ ನೀಡುವ ಪರಿಹಾರ ಮೊತ್ತವನ್ನು ಕಂಪನಿಯು ಪ್ರತ್ಯೇಕವಾಗಿ ಪರಿಶೀಲಿಸಿ ನಿಗಧಿಪಡಿಸಿ ನೀಡುವುದು.

ಭೂಮಾಪನ ಕಾರ್ಯ

4837 - ಶ್ರೀ ಬೆಲ್ಲದ್ ಚಂದ್ರಕಾಂತ ಗುರಪ್ಪ (ಧಾರವಾಡ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ರಾಜ್ಯದಲ್ಲಿನ ಭೂಮಿಯ ಭೂಮಾಪನ ಕಾರ್ಯ ಎಷ್ಟು ವರ್ಷಗಳ ಹಿಂದೆ ಆಗಿದೆ?*
2. *ಈಗ ಎಲ್ಲ ಭೂಮಿಯ ಮಾಪನ ಮಾಡುವ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*
3. *ಹಾಗಿದ್ದಲ್ಲಿ ಈ ಕಾರ್ಯವನ್ನು ಸರ್ಕಾರ ಎಂದಿನಿಂದ ಕೈಗೆತ್ತಿಕೊಳ್ಳುವುದು?*

ಶ್ರೀ ಹೆಚ್. ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಈ ಕಾರ್ಯ 110 ವರ್ಷಗಳ ಹಿಂದೆ ಆಗಿದೆ.

ಆ) ಹೌದು.

ಇ) ಈ ಕಾರ್ಯಕ್ಕೆ ಹೆಚ್ಚಿನ ಹಣಕಾಸಿನ ಅವಶ್ಯಕತೆ ಇರುವುದರಿಂದ ಈ ಬಗ್ಗೆ ಪರಿಶೀಲಿಸಲಾಗುವುದು.

ರಾಜ್ಯದಲ್ಲಿರುವ ಕೈಗಾರಿಕಾ ಸಹಕಾರ ಸಂಘಗಳು

4838 - ಶ್ರೀ ಬೆಲ್ಲದ್ ಚಂದ್ರಕಾಂತ ಗುರಪ್ಪ (ಧಾರವಾಡ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಇರುವ ಕೈಗಾರಿಕಾ ಸಹಕಾರ ಸಂಘಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)*